# ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ಪ್ರಾಧ್ಯಾಪಕರ ನೇಮಕಾತಿ

## ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಮಾರ್ಗಸೂಚಿಗಳು.

1. ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳು, ಪ್ರಾಧಿಕಾರದಿಂದ ನಿಗದಿಪಡಿಸಿದ ದಿನಾಂಕದಂದೇ ಹಾಜರಾಗತಕ್ಕದ್ದು. ನಿಗದಿ ಪಡಿಸಿದ ದಿನಾಂಕದಂದು ಹಾಜರಾಗದ ಅಭ್ಯರ್ಥಿಗಳಿಗೆ ಇತರೆ ದಿನಾಂಕದಂದು ಮೂಲ ದಾಖಲೆಗಳ ಪರಿಶೀಲನೆಗೆ ಅವಕಾಶ ನೀಡಲಾಗುವುದಿಲ್ಲ.
2. ಅಭ್ಯರ್ಥಿಗಳು ಸಲ್ಲಿಸುವ ಎಲ್ಲಾ ಮೂಲ ದಾಖಲೆಗಳು ಅರ್ಜಿ ಸಲ್ಲಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಜಾರಿಯಾಗಿರತಕ್ಕದ್ದು.
3. ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಮೂಲ ದಾಖಲೆಗಳನ್ನು ಹಾಜರು ಪಡಿಸತಕ್ಕದ್ದು.

ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ಮತ್ತು ಮೂಲ ದಾಖಲೆಗಳ ಎರಡು ಜೆರಾಕ್ಸ್ ಪ್ರತಿಗಳಿಗೆ ಪತ್ರಾಂಕಿತ ಅಧಿಕಾರಿಗಳಿಂದ ಧೃಡಿಕರಿಸಿ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

a. ಇತ್ತೀಚಿನ ಎರಡು ಪಾಸ್‌ಪೋರ್ಟ್ ಸೈಜ್ ಭಾವ ಚಿತ್ರ.

b. ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶ ಪತ್ರಗಳು. (ಒಂದಕ್ಕಿಂತ ಹೆಚ್ಚು ವಿಷಯಗಳಿಗೆ ಅರ್ಜಿ ಸಲ್ಲಿಸಿದ್ದಲ್ಲಿ, ಎಲ್ಲಾ ವಿಷಯಗಳ ಪರೀಕ್ಷೆಯ ಪ್ರವೇಶ ಪತ್ರಗಳು)

c. ಅನ್‌ಲೈನ್‌ನಲ್ಲಿ ಸಲ್ಲಿಸಿರುವ ಅಂತಿಮ ಅರ್ಜಿ ನಮೂನೆ.

d. ಜಾರಿಯಲ್ಲಿರುವ ಗುರುತಿನ ಚೀಟಿ.
(PAN card / Voter ID /Passport/ Driving license/ Aadhaar card, etc.)

e. ಜನ್ಮ ದಿನಾಂಕ ಪರಿಶೀಲಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ತತ್ಸಮಾನ ಪ್ರಮಾಣ ಪತ್ರ.

f. ಪದವಿಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ ಮತ್ತು ಪ್ರಮಾಣ ಪತ್ರ / ಘಟಿಕೋತ್ಸವ ಪ್ರಮಾಣ ಪತ್ರ (Convocation certificate).

g. ಸ್ನಾತಕೋತ್ತರ ಪದವಿಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕ ಪಟ್ಟಿ ಮತ್ತು ಪ್ರಮಾಣ ಪತ್ರ / ಘಟಿಕೋತ್ಸವ ಪ್ರಮಾಣ ಪತ್ರ (Convocation certificate).

h. ಯುಜಿಸಿ ಅಥವಾ ಸಿಎಸ್‌ಐಆರ್ ಮೂಲಕ ನಡೆಸಲಾದ "ರಾಷ್ಟ್ರೀಯ ಅರ್ಹತಾ ಪರೀಕ್ಷೆ"ಯಲ್ಲಿ ಅಥವಾ ಅಂಥ ಯುಜಿಸಿ "ರಾಜ್ಯ ಮಟ್ಟದ ಅರ್ಹತಾ ಪರೀಕ್ಷೆ" ಅಥವಾ "ಕೆಸೆಟ್" ಪರೀಕ್ಷೆಯಲ್ಲಿ ಯಶಸ್ವಿಯಾಗಿ ತೇರ್ಗಡೆಯಾದ ಪ್ರಮಾಣ ಪತ್ರಗಳು.

i. ವಿಶ್ವವಿದ್ಯಾಲಯ ಧನ ಸಹಾಯ ಆಯೋಗ (ಎಂಫಿಲ್/ಪಿಎಚ್‌ಡಿ ಪದವಿ ನೀಡಿಕೆಗಾಗಿ ಕನಿಷ್ಠ ಮಾನದಂಡಗಳು ಮತ್ತು ಪ್ರಕ್ರಿಯೆ) ವಿನಿಯಮಗಳು, 2009 ಅಥವಾ ವಿಶ್ವವಿದ್ಯಾಲಯ ಧನ ಸಹಾಯ ಆಯೋಗ (ಎಂಫಿಲ್/ಪಿಎಚ್‌ಡಿ ಪದವಿ ನೀಡಿಕೆಗಾಗಿ ಕನಿಷ್ಠ ಮಾನದಂಡಗಳು ಮತ್ತು ಪ್ರಕ್ರಿಯೆ) ವಿನಿಯಮಗಳು, 2016ರ ಮತ್ತು ಸಂದರ್ಭಾನುಸಾರ ತರುವಾಯ ಕಾಲಕಾಲಕ್ಕೆ ಅವುಗಳಿಗೆ ಮಾಡಲಾದ ತಿದ್ದುಪಡಿಗಳಿಗೆ ಅನುಸಾರವಾಗಿ ಪಿಎಚ್‌ಡಿ ಪದವಿಯನ್ನು ಪಡೆದಿರುವಂತಹ ಅಭ್ಯರ್ಥಿಗಳಿಗೆ, ಅಗತ್ಯವಿರುವ ಎನ್‌ಇಟಿ/ಎಸ್ ಎಲ್‌ಇಟಿ/ಎಸ್‌ಇಟಿಯ ಕನಿಷ್ಠ ಅರ್ಹತಾ ಷರತ್ತುಗಳ ಅಗತ್ಯದಿಂದ ವಿನಾಯಿತಿ ನೀಡಲಾಗುವುದು. ಆದರೆ,

ಜುಲೈ 11, 2009ಕ್ಕೆ ಮುಂಚೆ ಎಂಫಿಲ್ ಅಥವಾ ಪಿ.ಎಚ್‌ಡಿ ಪದವಿಗಾಗಿ ನೋಂದಾಯಿಸಿದ ಅಭ್ಯರ್ಥಿಗಳಿಗೆ ಆ ಪದವಿ ನೀಡುವ ಸಂಸ್ಥೆಗಳಲ್ಲಿ ಅಂದು ಜಾರಿಯಲ್ಲಿದ್ದ ಅಧ್ಯಾದೇಶಗಳು/ಉಪ-ವಿಧಿಗಳು/ವಿನಿಯಮಗಳು, ಉಪಬಂಧಗಳಿಗನುಸಾರವಾಗಿ ಪದವಿಯನ್ನು ಪಡೆದಿರತಕ್ಕದ್ದು ಮತ್ತು ಅಂತಹ ಪಿ.ಎಚ್‌ಡಿ ಅಭ್ಯರ್ಥಿಗಳಿಗೆ ಈ ಮುಂದಿನ ಷರತ್ತುಗಳನ್ನು ಪೂರೈಸುವ ಷರತ್ತಿಗೆ ಒಳಪಟ್ಟು ಅಗತ್ಯವಿರುವಂತಹ ಎನ್‌ಇಟಿ/ಎಸ್‌ಎಲ್‌ಇಟಿ/ಎಸ್‌ಇಟಿಯಿಂದ ವಿನಾಯಿತಿ ನೀಡತಕ್ಕದ್ದು.

(ಎ) ಅಭ್ಯರ್ಥಿಯು ಪಿ.ಎಚ್‌ಡಿ ಪದವಿಯನ್ನು ನಿಯಮಿತ (ರೆಗ್ಯುಲರ್) ರೀತಿಯಲ್ಲಿ ಪಡೆದಿರಬೇಕು;

(ಬಿ) ಪಿ.ಎಚ್‌ಡಿ ಪ್ರಬಂಧವು ಕನಿಷ್ಠ ಇಬ್ಬರು ಬಾಹ್ಯ ವಿಷಯ ಪರೀಕ್ಷಕರಿಂದ ಅನುಮೋದಿತವಾಗಿರತಕ್ಕದ್ದು;

(ಸಿ) ಪಿ.ಎಚ್‌ಡಿಗೆ ಸಂಬಂಧಿಸಿದಂತೆ ಮುಕ್ತ ಅಭ್ಯರ್ಥಿಯ ಮೌಖಿಕ ಸಂದರ್ಶನ ನಡೆಸಿರತಕ್ಕದ್ದು;

(ಡಿ) ಅಭ್ಯರ್ಥಿಯು ಆತನ ಪಿ.ಎಚ್‌ಡಿ ವಿಷಯಕ್ಕೆ ಸಂಬಂಧಿಸಿದಂತೆ ಎರಡು ಸಂಶೋಧನಾ ಲೇಖನಗಳನ್ನು ಪ್ರಕಟಿಸತಕ್ಕದ್ದು. ಅದರಲ್ಲಿ ಒಂದು ಲೇಖನ ಪರಾಮರ್ಶನ ಜರ್ನಲ್‌ನಲ್ಲಿ ಪ್ರಕಟವಾಗತಕ್ಕದ್ದು;

(ಇ) ಅಭ್ಯರ್ಥಿಯು ತನ್ನ ಪಿ.ಎಚ್‌ಡಿ ಕಾರ್ಯವನ್ನು ಆಧರಿಸಿ ಕನಿಷ್ಠ ಪಕ್ಷ 2 ಪತ್ರಿಕೆಗಳನ್ನು ಯುಜಿಸಿ ಅಥವಾ ಐಸಿಎಸ್‌ಎಸ್‌ಆರ್ ಅಥವಾ ಸಿಎಸ್‌ಐಆರ್ ಅಥವಾ ಯಾವುದೇ ಅಂತಹುದೇ ಏಜೆನ್ಸಿಯ ಮೂಲಕ ಪ್ರಾಯೋಜಿಸಲಾದ ಅಥವಾ ಧನ ಸಹಾಯ ಮಾಡಲಾದ ಅಥವಾ ಬೆಂಬಲಿಸಿದ ಸಮ್ಮೇಳನಗಳು ಅಥವಾ ವಿಚಾರ ಸಂಕೀರಣಗಳಲ್ಲಿ ಮಂಡಿಸತಕ್ಕದ್ದು.

ಈ ಮೇಲಿನ ಷರತ್ತುಗಳನ್ನು ಪೂರೈಸಿರುವುದರ ಕುರಿತು ಸಂಬಂಧಪಟ್ಟ ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಅಥವಾ ಡೀನ್ (ಶೈಕ್ಷಣಿಕ ವ್ಯವಹಾರಗಳು) ಇವರು ಪ್ರಮಾಣೀಕರಿಸಿರುವ ದಾಖಲೆಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಮತ್ತು ಮೂಲ ದಾಖಲೆಗಳ ಪರಿಶೀಲನೆಗೆ ಸಲ್ಲಿಸಬೇಕು.

**ಈ ಕೆಳಗಿನಂತೆ ಪಿ.ಎಚ್.ಡಿ ಪದವಿಯ ಪ್ರಮಾಣ ಪತ್ರಗಳನ್ನು ಮೂಲದಾಖಲೆಗಳ ಪರಿಶೀಲನೆಗೆ ಹಾಜರುಪಡಿಸಿದ ಷರತ್ತಿಗೆ ಒಳಪಟ್ಟು ಅಗತ್ಯವಿರುವ ಎನ್‌ಇಟಿ/ಎಸ್‌ಎಲ್‌ಇಟಿ/ಎಸ್‌ಇಟಿಯಿಂದ ವಿನಾಯಿತಿ ನೀಡಲಾಗುವುದು.**

- ಕ್ವಾಸಿಕ್ವಾರಲ್ಲಿ ಸೈಮಂಡ್ಸ್ (QS) ಅಥವಾ;
- ದಿ ಟೈಮ್ಸ್ ಹೈಯರ್ ಎಜ್ಯುಕೇಷನ್ (THE) ಅಥವಾ;
- ಶಾಂಗೈ ಜಿಯೋ ಟಾಂಗ್ ವಿಶ್ವವಿದ್ಯಾಲಯ (ಶಾಂಗೈ)ದ ಜಾಗತೀಕ ವಿಶ್ವವಿದ್ಯಾಲಯಗಳ ಶೈಕ್ಷಣಿಕ ರ್‍ಯಾಂಕಿಂಗ್ ನಲ್ಲಿ (ಯಾವುದೇ ಸಮಯದಲ್ಲಿ) ಮೊದಲ 500 ರ್‍ಯಾಂಕ್ ನಲ್ಲಿರುವ ವಿದೇಶಿ ವಿಶ್ವವಿದ್ಯಾಲಯಗಳ/ ಸಂಸ್ಥೆಯಿಂದ ಪಿ.ಎಚ್.ಡಿ ಪದವಿಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

**ಅಭ್ಯರ್ಥಿಗಳು ಅನ್‌ಲೈನ್ ಅರ್ಜಿಯಲ್ಲಿ ಈ ಕೆಳಕಂಡ ಮೀಸಲಾತಿಗಳನ್ನು ಕೋರಿದ್ದಲ್ಲಿ ಮಾತ್ರ ಈ ಕೆಳಕಂಡ ಮೂಲ ದಾಖಲೆಗಳನ್ನು ಒದಗಿಸತಕ್ಕದ್ದು. ಅನ್‌ಲೈನ್ ಅರ್ಜಿಯಲ್ಲಿ ಯಾವುದೇ ಮೀಸಲಾತಿ ಕೋರಿರದಿದ್ದಲ್ಲಿ, ಈ ಹಂತದಲ್ಲಿ ಯಾವುದೇ ಮೀಸಲಾತಿ ನೀಡಲು ಅವಕಾಶ ಇರುವುದಿಲ್ಲ.**

j. ಅಭ್ಯರ್ಥಿಗಳು ಸರ್ಕಾರಿ ನೌಕರರಾಗಿ ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ, ಸಕ್ಷಮ ಪ್ರಾಧಿಕಾರವು ಜಾರಿ ಮಾಡಿದ ಸೇವಾ ಪ್ರಮಾಣ ಪತ್ರ.

k. ಅರ್ಜಿ ಸಲ್ಲಿಸಲು ಸಕ್ಷಮ ಪ್ರಾಧಿಕಾರವು ಜಾರಿ ಮಾಡಿದ ನಿರಾಕ್ಷೇಪಣಾ ಪತ್ರ.

l. ಕಾಲೇಜು ಶಿಕ್ಷಣ ಇಲಾಖೆಯ ಗ್ರೂಪ್–ಸಿ ನೌಕರರಾದಲ್ಲಿ, ಸಕ್ಷಮ ಪ್ರಾಧಿಕಾರವು ಜಾರಿ ಮಾಡಿದ ಸೇವಾ ಪ್ರಮಾಣ ಪತ್ರ.

m. ಅರ್ಜಿಯಲ್ಲಿ ಕೋರಿರುವ ಮೀಸಲಾತಿ ಅನುಸಾರ ಅಭ್ಯರ್ಥಿಯ ಹೆಸರಿನಲ್ಲಿ ಪಡೆದ ಜಾತಿ ಪ್ರಮಾಣ ಪತ್ರ / ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು.

1. ಪರಿಶಿಷ್ಟ ಜಾತಿ ಮತ್ತು ಪ.ಪಂಗಡ ಅಭ್ಯರ್ಥಿಗಳು Form-D ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
2. ಪ್ರವರ್ಗ–1 ರ ಅಭ್ಯರ್ಥಿಗಳು Form- E ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
3. 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು Form- F ನಮೂನೆಯಲ್ಲಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

(ವಿವಾಹಿತ ಅಭ್ಯರ್ಥಿಗಳು ಒಟ್ಟು ಕುಟುಂಬ ಆದಾಯವನ್ನು ಘೋಷಿಸಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸತಕ್ಕದ್ದು ಹಾಗೂ ವಿವಾಹಿತ ಮಹಿಳಾ ಅಭ್ಯರ್ಥಿಗಳು ತಮ್ಮ ಹೆಸರಿನೊಂದಿಗೆ ಅವರ ಪತಿಯ ಹೆಸರಿನಲ್ಲಿ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸತಕ್ಕದ್ದು)

n. ಪರಿಶಿಷ್ಟ ಜಾತಿ, ಪ.ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಿದ್ದಲ್ಲಿ, ಪರಿಶಿಷ್ಟ ಜಾತಿ, ಪ.ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಪ್ರಮಾಣ

ಪತ್ರಗಳೊಂದಿಗೆ 1 ನೇ ತರಗತಿಯಿಂದ 10ನೇ ತರಗತಿ ವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ನಮೂನೆ-2 ರಲ್ಲಿ ನೀಡಲಾದ ಪ್ರಮಾಣ ಪತ್ರಕ್ಕೆ ಸಂಬಂದಪಟ್ಟ ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಬಂದಿತ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲು ರುಜು ಮಾಡಿರತಕ್ಕದ್ದು.

o. ಸಾಮಾನ್ಯ ವರ್ಗದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಕೋರಿದ್ದಲ್ಲಿ, ಗ್ರಾಮೀಣ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್ ನೀಡಿರುವ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. (Non Creamy layer certificate)

p. ಕನ್ನಡ ಮಾಧ್ಯಮ ಮೀಸಲಾತಿ ಕೋರಿರುವ ಅಭ್ಯರ್ಥಿಗಳು 1ನೇ ತರಗತಿ ಇಂದ 10 ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧ ಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಜಾರಿ ಮಾಡಲಾದ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

q. ಅನುಚ್ಛೇಧ 371 (ಜೆ) ರಂತೆ (ಹೈದರಬಾದ್- ಕರ್ನಾಟಕ) ಕಲ್ಯಾಣ-ಕರ್ನಾಟಕ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಅನುಬಂಧ-ಎ ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೆ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧ ಪಟ್ಟ ಉಪವಿಭಾಗದ ಸಹಾಯಕ ಆಯುಕ್ತರ ಮೊಹರಿನೊಂದಿಗೆ ಸಹಿ ಮಾಡಿ ಜಾರಿಮಾಡಲಾದ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

r. ಸರ್ಕಾರಿ ಸೇವೆಯಲ್ಲಿರುವ ನೌಕರರು ಕಲ್ಯಾಣ- ಕರ್ನಾಟಕ ಮೀಸಲಾತಿ ಕೋರಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಕಛೇರಿ ಮುಖ್ಯಸ್ಥರಿಂದ/ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಸ್ವಗ್ರಾಮ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

s. ವಿಕಲಚೇತನ ಅಭ್ಯರ್ಥಿಗಳು ವಿವಿಧ ವೈಕಲ್ಯತೆಯ ಶೇ 40ಕ್ಕೆ ಕಡಿಮೆ ಇಲ್ಲದಿರುವ ಬಗ್ಗೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿ ಪಡಿಸಿದ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ನೀಡಲಾದ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

t. ಮಾಜಿ ಸೈನಿಕ ಮೀಸಲಾತಿ ಕೋರಿರುವ ಅಭ್ಯರ್ಥಿಗಳು, ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಬಗ್ಗೆ ನೀಡಲಾದ Discharge certificate ನ್ನು ಅಥವಾ ಸೈನಿಕರು ಯುದ್ದ ಕಾರ್ಯಚರಣೆಯಲ್ಲಿ ಮೃತ ಪಟ್ಟಿದ್ದಲ್ಲಿ ಅದರ ಬಗ್ಗೆ ಸಕ್ಷಮ ಪ್ರಾಧಿಕಾರವು ನೀಡುವ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.

u. ತೃತೀಯ ಲಿಂಗ ಮೀಸಲಾತಿ ಕೋರಿರುವ ಅಭ್ಯರ್ಥಿಗಳು, ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) ಅಧಿನಿಯಮ 2019ರ ಕೇಂದ್ರ ಅಧಿನಿಯಮ 2019 ರ ಸೆಕ್ಷನ್ 6 ರ ಖಂಡ (1) ರಲ್ಲಿ ನಿರ್ದೇಶಿಸಿದಂತೆ, ಸಂಬಂಧ ಪಟ್ಟ, ಜಿಲ್ಲಾ ದಂಡಾಧಿಕಾರಿಗಳು ಜಾರಿಮಾಡಿರುವ ತೃತೀಯ ಲಿಂಗ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

**ಸೂಚನೆ:**

1. ಅಭ್ಯರ್ಥಿಗಳು ಸಲ್ಲಿಸಿರುವ ಮಾಹಿತಿ / ದಾಖಲೆಗಳು, ಸುಳ್ಳು / ತಿದ್ದುಪಡಿ ಮಾಡಿದ/ Tampered / forged / fabricated ದಾಖಲೆಗಳಾಗಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ಯಾವುದೇ ಮುನ್ಸೂಚನೆ ಇಲ್ಲದೆ ರದ್ದುಗೊಳಿಸಲಾಗುವುದು ಹಾಗೂ ಅವರ ಆಯ್ಕೆಯನ್ನು ಯಾವುದೇ ಸಮಯದಲ್ಲಾದರೂ ರದ್ದುಪಡಿಸಲಾಗುವುದು ಮತ್ತು ಅವರ ವಿರುದ್ದ ಕಾನೂನು ಕ್ರಮ ಜರುಗಿಸಲಾಗುವುದು.

2. ಮೂಲ ದಾಖಲೆಗಳ ಪರಿಶೀಲನೆಗೆ ಅಭ್ಯರ್ಥಿಯು ಖುದ್ದು ಹಾಜರಾಗತಕ್ಕದ್ದು.
(ಒಂದು ವೇಳೆ ಅಭ್ಯರ್ಥಿಗೆ ಪ್ರಯಾಣ ಮಾಡಲು ವೈದ್ಯರ ಸಲಹೆ ಮೂಲಕ ನಿಷೇದಿಸಿದ್ದಲ್ಲಿ, ಸೂಕ್ತ ವೈದ್ಯಕೀಯ ಪ್ರಮಾಣ ಪತ್ರ, ಮತ್ತು ಅಭ್ಯರ್ಥಿಯ ಒಪ್ಪಿಗೆ ಪತ್ರದೊಂದಿಗೆ ಅಭ್ಯರ್ಥಿಯ ಹತ್ತಿರದ ಸಂಬಂಧಿಗಳು ಮೂಲ ದಾಖಲೆಗಳೊಂದಿಗೆ ಹಾಜರಾಗಬಹುದು.)

3. ಒಂದಕ್ಕಿಂತ ಹೆಚ್ಚು ವಿಷಯಗಳಿಗೆ ಅರ್ಜಿ ಸಲ್ಲಿಸಿ, ಒಂದಕ್ಕಿಂತ ಹೆಚ್ಚು ವಿಷಯಗಳಿಗೆ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದಲ್ಲಿ, ಪ್ರತಿಯೊಂದು ವಿಷಯಕ್ಕೆ ಪ್ರತ್ಯೇಕವಾಗಿ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.

4. ಪ್ರಾಧಿಕಾರವು ನಿಗದಿಪಡಿಸಿದ ದಿನಾಂಕದಂದು ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದಿದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಅವಕಾಶ ನೀಡಲಾಗುವುದಿಲ್ಲ.
5. ಅಭ್ಯರ್ಥಿಗಳು, ಮೂಲ ದಾಖಲೆಗಳ ಸಮಯದಲ್ಲಿ ಸಂಬಂಧಪಟ್ಟ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.
6. ಯಾವುದೇ ಕಾರಣಕ್ಕೂ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಗೆ ಮತ್ತೊಮ್ಮೆ ಕಾಲಾವಕಾಶ ನೀಡಲಾಗುವುದಿಲ್ಲ, ಹಾಗೂ ಪ್ರಮಾಣ ಪತ್ರಗಳನ್ನು ಸಲ್ಲಿಸಲೂ ಸಹ ಮತ್ತೊಮ್ಮೆ ಕಾಲಾವಕಾಶ ನೀಡಲಾಗುವುದಿಲ್ಲ.
7. ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಲು ಪ್ರತ್ಯೇಕ ಮಾಹಿತಿ ನೀಡಲಾಗುವುದಿಲ್ಲ, ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರಾಧಿಕಾರದ ಅಂತರ್ಜಾಲದಿಂದ ಮಾಹಿತಿ ಪಡೆಯತಕ್ಕದ್ದು.
8. ಮೂಲ ದಾಖಲೆಗಳ ಪರಿಶೀಲನೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಛೇರಿ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012 ರಲ್ಲಿ ನಡೆಸಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ